# 2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ

## ಉತ್ತರ ಕನ್ನಡ : ಕಾರವಾರ

**ಎಸ್.ಸಿ. ಕೇಸ್ ನಂ. 20/2017**

**ದೋ.ಸಾ. :19 ಫ್ರಾ.ಸಾ. : 13**

| | | |
|---|---|---|
| ಸಾಕ್ಷಿಯ ಹೆಸರು | : | ಅಶೋಕ್ ಬಿ. ಬಂಟ್ |
| ತಂದೆಯ ಹೆಸರು | : | ಬೊಮ್ಮಯ್ಯ ಬಂಟ್ |
| ವಯಸ್ಸು | : | 56 ವರ್ಷ |
| ಕೆಲಸ | : | ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್, ಪಂಚಾಯತ್ ರಾಜ್, ಇಂಜಿನಿಯರಿಂಗ್ ಉಪ ವಿಭಾಗ, ಯಲ್ಲಾಪುರ |
| ವಾಸ | : | ಯಲ್ಲಾಪುರ |

**ದಿನಾಂಕಃ 20-11-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**(ದಂಡ ಪ್ರಕ್ರಿಯಾ ಸಂಹಿತೆ ಕಲಂ 299 ರಡಿಯಲ್ಲಿ ಸಾಕ್ಷಿಯ ವಿಚಾರಣೆ)**

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದಃ-**

1. ನಾನು ದಿ.04-11-2016 ರಿಂದ 10-02-2020 ರವರೆಗೆ ಅಂಕೋಲಾದ ಲೋಕೋಪಯೋಗಿ ಇಲಾಖೆಯಲ್ಲಿ ಸಹಾಯಕ ಇಂಜಿನಿಯರ್ ಆಗಿ ಕರ್ತವ್ಯ ನಿರ್ವಹಿಸಿದ್ದೇನೆ. ನಾನು ಬಿ.ಈ., ಸಿವಿಲ್ ಪದವೀಧರನಿದ್ದು, ನನಗೆ ನಿವೇಶನಗಳ ಹಾಗೂ ಕಟ್ಟಡಗಳ ನಕಾಶೆ ತಯಾರಿಸುವ ಅನುಭವ ಇರುತ್ತದೆ ಹಾಗೂ ಈಗಾಗಲೇ ಸಾಕಷ್ಟು ಪ್ರಕರಣಗಳಲ್ಲಿ ನಕಾಶೆ ತಯಾರಿಸಿ ನೀಡಿ, ಸಾಕ್ಷ್ಯ ನುಡಿದಿರುತ್ತೇನೆ.

2. ದಿ.23-02-2017 ರಂದು ಅಂಕೋಲಾ ಪೊಲೀಸರಿಂದ ನಮ್ಮ ಕಚೇರಿಗೆ ಒಂದು ಕೋರಿಕೆ ಪತ್ರ ಬಂದಿದ್ದು, ಅದರಲ್ಲಿ ಈ ಪ್ರಕರಣದ ಘಟನಾ ಸ್ಥಳವಾದ ಚಾಸಾ-7 ರವರ ಮನೆಯ ನಕಾಶೆಯನ್ನು ತಯಾರಿಸಿ ಕೊಡುವಂತೆ ಕೋರಿಕೊಂಡಿರುತ್ತಾರೆ. ಅದರಂತೆ, ನಮ್ಮ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ರವರು ನನಗೆ ಸದರಿ ಸ್ಥಳದ ನಕಾಶೆ ತಯಾರಿಸಿ, ನೀಡುವಂತೆ ಮೌಖಿಕವಾಗಿ ಸೂಚಿಸಿದ್ದು, ದಿ.07-03-2017 ರಂದು ಪೊಲೀಸ್ ಸಿಬ್ಬಂದಿಯಾದ ಚಾಸಾ-15 ರವರು ನನ್ನನ್ನು ಕರೆದುಕೊಂಡು ಹೋಗಿ ಘಟನಾ ಸ್ಥಳವನ್ನು ತೋರಿಸಿದ ಮೇರೆಗೆ, ನಾನು ಘಟನಾ

ಸ್ಥಳವನ್ನು ಪರಿಶೀಲಿಸಿ, ನಕಾಶೆ ತಯಾರಿಸಿ ನಂತರ ಅದನ್ನು ನಮ್ಮ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ರವರಿಗೆ ನೀಡಿರುತ್ತೇನೆ. ಸದರಿ ನಕಾಶೆಯನ್ನು ನಮ್ಮ ಕಾರ್ಯನಿರ್ವಾಹಕ ಇಂಜಿನಿಯರ್ ರವರು ಅಂಕೋಲಾ ಪೊಲೀಸರಿಗೆ ಕವಚ ಪತ್ರದೊಂದಿಗೆ ಕಳುಹಿಸಿಕೊಟ್ಟಿರುತ್ತಾರೆ. ಸಾಕ್ಷಿಯು ತಮ್ಮ ಕಚೇರಿಗೆ ಬಂದ ಕೋರಿಕೆ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-14 ಎಂದು ಗುರುತಿಸಲಾಯಿತು. ಸಾಕ್ಷಿಯು ತಾನು ತಯಾರಿಸಿದ ನಕಾಶೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-15 ಎಂದು, ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು ಮತ್ತು ಕವಚ ಪತ್ರವನ್ನು ನಿಪಿ-16 ಎಂದು ಗುರುತಿಸಲಾಯಿತು.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.
Sd/-
(ಮಾಯಣ್ಣ ಬಿ.ಎಲ್.)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರಕನ್ನಡ, ಕಾರವಾರ